## ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 566 |
| ಸದಸ್ಯರ ಹೆಸರು | : | ಶ್ರೀ ವಿಜಯಸಿಂಗ್ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 13-12-2018 |
| ಉತ್ತರಿಸುವ ಸಚಿವರು | : | ಮಾನ್ಯ ಮುಖ್ಯಮಂತ್ರಿಗಳು |

<table>
<tr><th>ಪ್ರಶ್ನೆ</th><th>ಉತ್ತರ</th></tr>
<tr><td>(ಅ) ಹೈದರಾಬಾದ್ - ಕರ್ನಾಟಕದಲ್ಲಿರುವ ಸರ್ಕಾರಿ ಕಾಲೇಜುಗಳ ಸಂಖ್ಯೆ ಎಷ್ಟು; ಅದರಲ್ಲಿ ಸರ್ಕಾರಿ ಪ್ರೌಢಶಾಲೆಗಳ ಕಟ್ಟಡಗಳಲ್ಲಿ ನಡೆಯುತ್ತಿರುವ ಕಾಲೇಜುಗಳ ಸಂಖ್ಯೆ ಎಷ್ಟು; (ಜಿಲ್ಲಾವಾರು ವಿವರ ನೀಡುವುದು)</td><td>ಹೈದರಾಬಾದ್-ಕರ್ನಾಟಕ ಭಾಗದಲ್ಲಿರುವ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ: 218. ಅವುಗಳಲ್ಲಿ ಸರ್ಕಾರಿ ಪ್ರೌಢಶಾಲೆಗಳ ಕಟ್ಟಡದಲ್ಲಿ ನಡೆಯುತ್ತಿರುವ ಕಾಲೇಜುಗಳ ಜಿಲ್ಲಾವಾರು ವಿವರ ಕೆಳಕಂಡಂತಿದೆ.
<table>
<tr><th>ಕ್ರಮ ಸಂಖ್ಯೆ</th><th>ಜಿಲ್ಲೆಯ ಹೆಸರು</th><th>ಕಾಲೇಜುಗಳ ಸಂಖ್ಯೆ</th></tr>
<tr><td>1</td><td>ಬಳ್ಳಾರಿ</td><td>01</td></tr>
<tr><td>2</td><td>ಬೀದರ್</td><td>00</td></tr>
<tr><td>3</td><td>ಕಲಬುರ್ಗಿ</td><td>04</td></tr>
<tr><td>4</td><td>ರಾಯಚೂರು</td><td>02</td></tr>
<tr><td>5</td><td>ಕೊಪ್ಪಳ</td><td>04</td></tr>
<tr><td>6</td><td>ಯಾದಗಿರಿ</td><td>00</td></tr>
<tr><td colspan="2">ಒಟ್ಟು</td><td>11</td></tr>
</table></td></tr>
<tr><td>(ಆ) ಈ ಭಾಗದಲ್ಲಿ ಸ್ವಂತ ಕಟ್ಟಡಗಳಿಲ್ಲದ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಸಂಖ್ಯೆ ಎಷ್ಟು; ಇದರಿಂದ ಪಾಠ ಪ್ರವಚನಗಳಿಗೆ ತೊಂದರೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;</td><td>ಮೇಲಿನ (ಅ) ರಂತೆ 11 ಪದವಿ ಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡಗಳಿರುವುದಿಲ್ಲ. ಈ ಕಾಲೇಜುಗಳಲ್ಲಿ, 2018-19ನೇ ಸಾಲಿನಲ್ಲಿ ಪ್ರಾರಂಭವಾದ ಕೆಲವು ಕಾಲೇಜುಗಳಿಗೆ ಹಾಗೂ ನಿವೇಶನದ ಸಮಸ್ಯೆ ಇರುವ ಕಾಲೇಜುಗಳಿಗೆ ಕಟ್ಟಡ ಮತ್ತು ಕೊಠಡಿಗಳನ್ನು ನಿರ್ಮಿಸುವಲ್ಲಿ ತೊಡಕಾಗಿರುತ್ತದೆ. ಆದರೆ ಪಾಠ ಪ್ರವಚನಗಳಿಗೆ ತೊಂದರೆಯಾಗದಂತೆ ಸ್ಥಳೀಯವಾಗಿ ಲಭ್ಯವಿರುವ ಸರ್ಕಾರದ ಕಟ್ಟಡಗಳನ್ನು ಉಪಯೋಗಿಸಿಕೊಂಡು ಕಾರ್ಯನಿರ್ವಹಿಸಲಾಗುತ್ತಿದೆ.</td></tr>
<tr><td>(ಇ) ಕಾಲೇಜುಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ಸರ್ಕಾರ ಯಾವ ಯೋಜನೆಗಳನ್ನು ಹಾಕಿಕೊಂಡಿದೆ?</td><td>ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಸ್ವಂತ ಕಟ್ಟಡಗಳನ್ನು ನಿರ್ಮಾಣ ಮಾಡಲು ನಬಾರ್ಡ್ ಸಹಯೋಗದ ಆರ್ಐಡಿಎಫ್ ಹಾಗೂ ರಾಜ್ಯ ಬಂಡವಾಳ ವೆಚ್ಚ ಯೋಜನೆಗಳಡಿ ಅನುದಾನ ಒದಗಿಸಲಾಗುತ್ತದೆ. ಸದರಿ ಯೋಜನೆಗಳಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶದ ಕಾಮಗಾರಿಗಳಿಗೆ ಆದ್ಯತೆ ನೀಡಲಾಗುತ್ತಿದೆ.<br><br>ಅಲ್ಲದೆ, 2018-19ನೇ ಸಾಲಿನಲ್ಲಿ ಹೈದರಾಬಾದ್ ಕರ್ನಾಟಕ ಪ್ರದೇಶಲ್ಲಿ ಹೊಸದಾಗಿ ಪ್ರಾರಂಭಿಸಲಾಗುವ ಕಾಲೇಜುಗಳಿಗೆ ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಸ್ವಂತ ಕಟ್ಟಡವನ್ನು ಮಂಜೂರು ಮಾಡುವ ಷರತ್ತಿನ ಮೇಲೆ ಮಂಜೂರಾತಿ ನೀಡಲಾಗಿದೆ ಹಾಗೂ ಈ ಪ್ರದೇಶದ ವ್ಯಾಪ್ತಿಯಲ್ಲಿನ ಆರು ಜಿಲ್ಲೆಗಳ ಸರ್ಕಾರಿ ಪದವಿ ಪೂರ್ವ ಕಾಲೇಜುಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಲು ಹೈದರಾಬಾದ್ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯು ಒಪ್ಪಿಗೆ ನೀಡಿರುತ್ತದೆ.</td></tr>
</table>

ಇಡಿ 322 ಯೋಸಕ 2018

(ಹೆಚ್.ಡಿ.ಕುಮಾರಸ್ವಾಮಿ)
ಮುಖ್ಯಮಂತ್ರಿ